**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**OS**- 366/2024 **DW**-1

**ದಿಃ 03.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಾದ ಶ್ರೀ ಜಿ ಎ ಭಟ್ ರವರಿಂದಃ**

ನಾನು ಈ ದಾವೆಯಲ್ಲಿ ಪ್ರತಿವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ವಿಚಾರಣೆಗೆ ಸಂಬಂಧಿಸಿದಂತೆ ನೋಟರಿಯವರ ಮುಂದೆ ದೃಢೀಕರಿಸಲಾದ ಜಿಪಿಎ ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಶಾನೆ ಡಿ 1 ಎಂದು, ಎರಡು quotation ಗಳನ್ನು ಹಾಜರುಪಡಿಸಿದ್ದು ಸದರಿ ದಾಖಲೆಗಳನ್ನು ನಿಶಾನೆ ಡಿ 2 ಮತ್ತು ನಿಶಾನೆ ಡಿ 3 ಎಂದು, ಐದು ವಿದ್ಯುಚ್ಛಕ್ತಿ ರಶೀದಿಗಳನ್ನು ಹಾಗೂ ಸಂದಾಯ ಮಾಡಿದ ಎರಡು ಹಣದ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಶಾನೆ ಡಿ 4 ರಿಂದ ನಿಶಾನೆ ಡಿ 10 ಎಂದು, ಎರಡು ಗ್ಯಾಸ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಶಾನೆ ಡಿ 11 ಮತ್ತು ನಿಶಾನೆ ಡಿ 12 ಎಂದು ಗುರ್ತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಪ್ರತಿವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು)**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

1 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ